# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2018-19ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಲಾಗಿರುವ ಕರ್ನಾಟಕ ಅಂತರಗಂಗ ಸೂಕ್ಷ್ಮ ನೀರಾವರಿ ನಿಗಮ ನಿಯಮಿತ ಸಂಸ್ಥೆಯ ಸರ್ವಾಂಗೀಣ ಅಭಿವೃದ್ಧಿ ಹೊಸ ಕಾರ್ಯಕ್ರಮದ ಅನುಷ್ಠಾನದ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಕೃತೋಇ 32 ಕೃಯೋಕಾ 2010, ದಿನಾಂಕ:08-09-2011.
2. 2018-19ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-28.
3. ವ್ಯವಸ್ಥಾಪಕ ನಿರ್ದೇಶಕರು, ಅಂತರಗಂಗಾ ಸೂಕ್ಷ್ಮ ನೀರಾವರಿ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ:ವ್ಯ.ನಿ-ಅಂ.ಸೂ.ನಿ.ನಿ/ತಾಂ/2018-19, ದಿ:13.08.2018.
4. ಸರ್ಕಾರದ ಆದೇಶ ಸಂ: ಕೃಇ 78 ಕೃಯೋಕಾ 2018, ದಿ:15/09/2018.
5. ಸರ್ಕಾರದ ಆದೇಶ ಸಂ: ಕೃಇ 81 ಕೃಕೈಲು 2018, ದಿ:28/09/2018

*****

**ಪ್ರಸ್ತಾವನೆ:**

2011-12ನೇ ಸಾಲಿನಲ್ಲಿ ರಾಜ್ಯದಲ್ಲಿ "ಕರ್ನಾಟಕ ಅಂತರಗಂಗಾ ಸೂಕ್ಷ್ಮ ನೀರಾವರಿ ನಿಗಮ" ಸ್ಥಾಪಿಸಲು ಸರ್ಕಾರವು ಮೇಲೆ ಓದಲಾದ (1) ರಲ್ಲಿನ ಆದೇಶದಲ್ಲಿ ಮಂಜೂರಾತಿಯನ್ನು ನೀಡಿರುತ್ತದೆ. ಆದರೆ ಸದರಿ ನಿಗಮವು ಕಾರಣಾಂತರದಿಂದ ಕಾರ್ಯಾರಂಭ ಮಾಡಿರುವುದಿಲ್ಲ.

ಮೇಲೆ ಓದಲಾದ(2) ರಲ್ಲಿ ರಾಜ್ಯ ಸರ್ಕಾರವು ಕರ್ನಾಟಕ ಅಂತರಗಂಗಾ ಸೂಕ್ಷ್ಮ ನೀರಾವರಿ ನಿಗಮವನ್ನು ಅಭಿವೃದ್ಧಿ ಪಡಿಸಲು 2018-19ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಈ ಕೆಳಕಂಡಂತೆ ಘೋಷಿಸಿರುತ್ತದೆ.

**"ಕರ್ನಾಟಕ ಅಂತರಗಂಗಾ ಸೂಕ್ಷ್ಮ ನೀರಾವರಿ ನಿಗಮ ನಿಯಮಿತ ಸಂಸ್ಥೆಯ ಸರ್ವಾಂಗೀಣ ಅಭಿವೃದ್ಧಿಗಾಗಿ ಹಾಗೂ ಮೂಲಭೂತ ಸೌಕರ್ಯಗಳಿಗಾಗಿ ರೂ.2.00 ಕೋಟಿಗಳನ್ನು ಒದಗಿಸಲಾಗುವುದು"**

ಮೇಲೆ (3) ರಲ್ಲಿ ಓದಲಾದ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಂತರಗಂಗಾ ಸೂಕ್ಷ್ಮ ನೀರಾವರಿ ನಿಗಮ ನಿಯಮಿತ ಇವರ ಪ್ರಸ್ತಾವನೆಯಲ್ಲಿ 2018-19ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ 4401-00-108-0-04(059) ಅಡಿ ಒಟ್ಟು ರೂ.2.00 ಕೋಟಿ ಅನುದಾನ ಮೀಸಲಿಡಲಾಗಿದೆ. ಸದರಿ ಅನುದಾನದಲ್ಲಿ ಸದರಿ ಸಂಸ್ಥೆಯ ನೋಂದಣಿ ಪ್ರಕ್ರಿಯೆಗೆ ತಗಲುವ ವೆಚ್ಚ, ಕಚೇರಿ, ಅಧಿಕಾರಿ/ಸಿಬ್ಬಂದಿ/ಹೊರಗುತ್ತಿಗೆ ವೇತನ, ವಾಹನ ಸೌಕರ್ಯ ಮತ್ತು ಇಂದನ, ಕಚೇರಿಗೆ ಬೇಕಾಗುವ ಗಣಕೀಕರಣದ ವ್ಯವಸ್ಥೆ, ಪೀಠೋಪಕರಣಗಳು,

ನಿರ್ವಹಣೆ ಮತ್ತು ಸಲಹಾ ವೆಚ್ಚ ಭರಿಸಲಾಗುವುದು ಎಂದು ವಿವರಿಸುತ್ತಾ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಮಂಜೂರಾತಿ ನೀಡಿ ಆದೇಶ ಹೊರಡಿಸಬೇಕೆಂದು ಕೋರಲಾಗಿದೆ.

ಮೇಲೆ (4)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಕೃಷಿ ಇಲಾಖೆಯ ರಾಜ್ಯವಲಯ ಯೋಜನೆಗಳಿಗೆ ಎರಡನೇ ತ್ರೈಮಾಸಿಕ ಅನುದಾನ ಬಿಡುಗಡೆಗೊಳಿಸಿದ್ದು, ಸದರಿ ಯೋಜನೆಗಳ ಪೈಕಿ ಕರ್ನಾಟಕ ಅಂತರಗಂಗಾ ಸೂಕ್ಷ್ಮ ನೀರಾವರಿ ನಿಗಮಕ್ಕೆ ಸಂಬಂಧಿಸಿದಂತೆ ಲೆಕ್ಕ ಶೀರ್ಷಿಕೆ: 4401-00-108-0-04 ರಡಿ ಒಟ್ಟು ರೂ.100.00 ಲಕ್ಷ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.

ಮೇಲೆ (5)ರಲ್ಲಿ ಕರ್ನಾಟಕ ಅಂತರಗಂಗಾ ಸೂಕ್ಷ್ಮ ನೀರಾವರಿ ನಿಗಮ ನಿಯಮಿತವನ್ನು (Karnataka Antharaganga Micro Irrigation Corporation Limited) ಹೊಸದಾಗಿ ಕಂಪನಿ ಕಾಯ್ದೆ 2013 ರಡಿ ನೋಂದಾಯಿಸಲು ಸರ್ಕಾರವು ಅನುಮತಿಯನ್ನು ನೀಡುತ್ತಾ, ಅದಕ್ಕೆ ಪೂರಕವಾದ ಅಂಶಗಳಿಗೆ ಸಹ ಸರ್ಕಾರದ ಅನುಮೋದನೆಯನ್ನು ನೀಡಿರುತ್ತದೆ. ಮುಂದುವರೆದು, ಕೃಷಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಗಳಲ್ಲಿ ಹಾಲಿ ಚಾಲ್ತಿ ಇರುವ ಸೂಕ್ಷ್ಮ ನೀರಾವರಿ ಯೋಜನೆಗಳನ್ನು ಕರ್ನಾಟಕ ಅಂತರಗಂಗಾ ಸೂಕ್ಷ್ಮ ನೀರಾವರಿ ನಿಗಮದ ಮುಖೇನ ಅನುಷ್ಠಾನಗೊಳಿಸಲು ಹಾಗೂ ನಿಗಮದ ಎಲ್ಲಾ ಆಡಳಿತಾತ್ಮಕ ಚಟುವಟಿಕೆಗಳನ್ನು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಂತರಗಂಗಾ ಸೂಕ್ಷ್ಮ ನೀರಾವರಿ ನಿಗಮ ನಿಯಮಿತ ಇವರು ಕೈಗೊಳ್ಳಲು ಹಾಗೂ ಆಯವ್ಯಯ ಲೆಕ್ಕಶೀರ್ಷಿಕೆ 4401-00-108-0-04-059 ರಡಿ ಒದಗಿಸಲಾಗಿರುವ ಅನುದಾನದಿಂದ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿರುತ್ತದೆ.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಂತರಗಂಗಾ ಸೂಕ್ಷ್ಮ ನೀರಾವರಿ ನಿಗಮ ನಿಯಮಿತ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 82 ಕೃಕೈಲು 2018, ಬೆಂಗಳೂರು,**
**ದಿನಾಂಕ: 01-01-2019**

2018-19ನೇ ಸಾಲಿನ ಜುಲೈ 2018ರ ಆಯವ್ಯಯ ಭಾಷಣದ ಕಂಡಿಕೆ-28 ರ ಘೋಷಣೆ ಅನ್ವಯ ರಾಜ್ಯದಲ್ಲಿ "ಕರ್ನಾಟಕ ಅಂತರಗಂಗ ಸೂಕ್ಷ್ಮ ನೀರಾವರಿ ನಿಗಮ ನಿಯಮಿತ ಸಂಸ್ಥೆಯ ನೋಂದಣಿ ಪ್ರಕ್ರಿಯೆ ಹಾಗೂ ಸಂಸ್ಥೆಗೆ ಅವಶ್ಯವಾದ ಮೂಲಭೂತ ಸೌಕರ್ಯಗಳು ಹಾಗೂ ಅವಶ್ಯಕ ವೆಚ್ಚಗಳನ್ನು ಭರಿಸಲು ಸರ್ಕಾರದ ಆಡಳಿತಾತ್ಮಕ ಮಂಜೂರಾತಿ ನೀಡಿದೆ.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಂತರಗಂಗಾ ಸೂಕ್ಷ್ಮ ನೀರಾವರಿ ನಿಗಮ ನಿಯಮಿತ ಇವರು ಕೆಟಿಟಿಪಿ ಕಾಯ್ದೆ 1999ರ ಅನುಸಾರ ಅಗತ್ಯ ಸೌಲಭ್ಯಗಳನ್ನು ಪಡೆಯಲು ಕ್ರಮವಹಿಸತಕ್ಕದ್ದು. ಸದರಿ ವೆಚ್ಚವನ್ನು 2018-19ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ 4401-00-108-0-04(059) ಅಡಿ ಒದಗಿಸಿರುವ **ರೂ.200.00 ಲಕ್ಷಗಳ** (ಎರಡು ನೂರು ಲಕ್ಷ ರೂಪಾಯಿಗಳು ಮಾತ್ರ) ಅನುದಾನದಿಂದ ಭರಿಸಲು ಅನುಮತಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂ: ಆಇ 542 ವೆಚ್ಚ-4/2018 ದಿನಾಂಕ: 31-08-2018 ರಲ್ಲಿ ಹಾಗು ಯೋಜನಾ ಇಲಾಖೆಯು ಟಿಪ್ಪಣಿ ಸಂಖ್ಯೆ:ಪಿಡಿ 60 ಪಿಎಫ್ಒ 2018, ದಿನಾಂಕ:03-09-2018 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

B S Nagarathnam

(ಬಿ.ಎಸ್.ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ)

ಇವರಿಗೆ,

1) ಪ್ರಧಾನ ಮಹಾಲೇಖಪಾಲರು (ಜಿ & ಎಸ್.ಎಸ್ ಎ) ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2) ಪ್ರಧಾನ ಮಹಾಲೇಖಪಾಲರು (ಎ & ಇ ) ಕರ್ನಾಟಕ ಪಾರ್ಕ್‌ಹೌಸ್ ರಸ್ತೆ , ಬೆಂಗಳೂರು-01.
3) ಕೃಷಿ ಆಯುಕ್ತರು / ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
4) ವ್ಯವಸ್ಥಾಪಕ ನಿರ್ದೇಶಕರು, ಅಂತರಗಂಗಾ ಸೂಕ್ಷ್ಮ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
5) ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು
6) ಸರ್ಕಾರದ ಜಂಟಿ ಕಾರ್ಯದರ್ಶಿ-1, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು
7) ಸರ್ಕಾರದ ಉಪ ಕಾರ್ಯದರ್ಶಿ ಮತ್ತು ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ. ಬೆಂಗಳೂರು.
8) ಸರ್ಕಾರದ ಉಪಕಾರ್ಯದರ್ಶಿ(ಆಡಳಿತ), ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
9) ಶಾಖಾ ರಕ್ಷ ಕಡತ/ ಹೆಚ್ಚುವರಿ ಪ್ರತಿಗಳು